## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು: ಡಾ. ಆರತಿ ಕೃಷ್ಣ
(ನಾಮ ನಿರ್ದೇಶನ ಹೊಂದಿದವರು)

ಚುಕ್ಕೆರಹಿತ ಪ್ರಶ್ನೆ ಸಂಖ್ಯೆ: 729 (948)

ಉತ್ತರಿಸಬೇಕಾದ ದಿನಾಂಕ: 24.08.2026

ಉತ್ತರಿಸುವ ಸಚಿವರು: ಮಾನ್ಯ ಉನ್ನತ ಶಿಕ್ಷಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ ಸರ್ಕಾರಿ ಹಾಗೂ ಖಾಸಗಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ NRI/OCI ವಿದ್ಯಾರ್ಥಿಗಳಿಗೆ ಮೀಸಲಾದ ಸೀಟುಗಳ ಸಂಖ್ಯೆ ಎಷ್ಟು; NRI/OCI ವಿದ್ಯಾರ್ಥಿಗಳಿಗೆ ಪ್ರತ್ಯೇಕ ಪ್ರವೇಶ ಮಾರ್ಗಸೂಚಿ ಇದೆಯೇ; ಇದ್ದಲ್ಲಿ, ಕೋರ್ಸ್‌ವಾರು ವಿವರ ನೀಡುವುದು ಮತ್ತು ಈ ಸೀಟುಗಳ ಭರ್ತಿ ಪ್ರಮಾಣದ ಮಾಹಿತಿ ಒದಗಿಸುವುದು. | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೊಳಪಡುವ ಸರ್ಕಾರಿ ಪ್ರಥಮ ದರ್ಜೆ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಸ್ನಾತಕ/ಸ್ನಾತಕೋತ್ತರ ಕೋರ್ಸುಗಳಿಗೆ NRI/OCI ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯಬಹುದಾಗಿರುತ್ತದೆ. ಆದರೆ, ಸದರಿ NRI/OCI ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಸೀಟುಗಳನ್ನು ಮೀಸಲಿರಿಸುವುದಿಲ್ಲ.<br><br>ಕರ್ನಾಟಕದಲ್ಲಿ 10ನೇ ಅಥವಾ 12ನೇ ತರಗತಿ ಸೇರಿದಂತೆ 7 ವರ್ಷಗಳ ಅಧ್ಯಯನದ ಸಂದರ್ಭದಲ್ಲಿ- ಅಥವಾ ಅಭ್ಯರ್ಥಿಯು ಕರ್ನಾಟಕದಲ್ಲಿ 11 ಮತ್ತು 12ನೇ ತರಗತಿಯ ವ್ಯಾಸಂಗ ಮತ್ತು ಪೋಷಕರ 7 ವರ್ಷ ರಾಜ್ಯದಲ್ಲಿ ಅಧ್ಯಯನ ಸಂದರ್ಭದಲ್ಲಿ, ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ 4773/2020, 5656/2023, 15400/2024, 25051/2024, 33292/2025 ಮತ್ತು ಇತರೆ ಪ್ರಕರಣಗಳಲ್ಲಿ ಹಾಗೂ ರಿಟ್ ಅರ್ಜಿ ಸಂಖ್ಯೆ 891/2021 ರಲ್ಲಿನ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ OCI/PIO ಅಭ್ಯರ್ಥಿಗಳನ್ನು ಭಾರತೀಯ ನಾಗರೀಕರಿಗೆ ಸಮಾನವಾಗಿ ಪರಿಗಣಿಸಲಾಗುತ್ತದೆ ಮತ್ತು ಸಾಮಾನ್ಯ ವರ್ಗದ ಸೀಟುಗಳಿಗೆ ಅರ್ಹರಾಗಿರುತ್ತಾರೆ- ಯಾವುದೇ ಮೀಸಲಾತಿ ಪಡೆಯಲು ಅರ್ಹರಲ್ಲ. |
| ಆ) | NRI/OCI ವಿದ್ಯಾರ್ಥಿಗಳಿಗೆ ವಿಧಿಸಲಾಗುವ ಶುಲ್ಕಗಳು ಸಾಮಾನ್ಯ ವಿದ್ಯಾರ್ಥಿಗಳಿಗಿಂತ ಹೆಚ್ಚು ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಶುಲ್ಕ ನಿಯಂತ್ರಣಕ್ಕೆ ಕ್ರಮಗಳೇನು; ಶುಲ್ಕಗಳ ಗರಿಷ್ಠ ಮಿತಿ ನಿಗದಿ ಮಾಡುವ ಯೋಜನೆ ಇದೆಯೇ; ಕರ್ನಾಟಕ ಮೂಲದ NRI ಮಕ್ಕಳಿಗೆ ವಿಶೇಷ ಶುಲ್ಕ ಸಡಿಲಿಕೆ ನೀಡುವ ಯೋಜನೆ ಇದೆಯೇ; | ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಗೊಳಪಡುವ ಸರ್ಕಾರಿ ಪ್ರಥಮ ದರ್ಜೆ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳು ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸ್ನಾತಕ/ಸ್ನಾತಕೋತ್ತರ ಕೋರ್ಸುಗಳಿಗೆ ಸಂಬಂಧಿಸಿದಂತೆ ಪ್ರವೇಶಾತಿ ಬಯಸುವ NRI/OCI ವಿದ್ಯಾರ್ಥಿಗಳಿಗೆ, ಸದರಿ ವಿದ್ಯಾರ್ಥಿಗಳು NRI/OCI ಎಂಬ ಕಾರಣದಿಂದಾಗಿ ಇತರ ವಿದ್ಯಾರ್ಥಿಗಳಿಗಿಂತ ಪ್ರತ್ಯೇಕವಾಗಿ ಪ್ರವೇಶಾತಿ ಶುಲ್ಕವನ್ನು ನಿಗದಿಪಡಿಸುವುದಿಲ್ಲ. ಬದಲಾಗಿ, ಎಲ್ಲಾ ವಿದ್ಯಾರ್ಥಿಗಳಿಗೆ ಇರುವಂತೆಯೇ ಪ್ರವೇಶಾತಿ ಶುಲ್ಕವನ್ನು ನಿಗದಿಪಡಿಸಲಾಗಿದೆ. |
| ಇ) | NRI/OCI ವಿದ್ಯಾರ್ಥಿಗಳಿಗೆ ರಾಜ್ಯದಲ್ಲಿ ವಿದ್ಯಾರ್ಥಿ ವೇತನ ಅಥವಾ ಆರ್ಥಿಕ ಸಹಾಯ ಯೋಜನೆಗಳಿವೆಯೇ; (ಮಾಹಿತಿ ನೀಡುವುದು) | NRI/OCI ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಇಲಾಖೆಯಿಂದ ವಿದ್ಯಾರ್ಥಿ ವೇತನ ಅಥವಾ ಆರ್ಥಿಕ ಸಹಾಯ ನೀಡುವ ಯಾವುದೇ ಯೋಜನೆಗಳು ಜಾರಿಯಲ್ಲಿರುವುದಿಲ್ಲ. |

| | | |
|---|---|---|
| ಈ) | ಮೆರಿಟ್ ಆಧಾರಿತ ವಿದ್ಯಾರ್ಥಿವೇತನ ಯೋಜನೆ ರೂಪಿಸುವ ಬಗ್ಗೆ ಸರ್ಕಾರದ ಯೋಜನೆ ಏನು: ಗಲ್ಫ್ ದೇಶಗಳಲ್ಲಿ ಕೆಲಸ ಮಾಡುವ ಕಾರ್ಮಿಕರ ಮಕ್ಕಳಿಗೆ ವಿಶೇಷ ಸಹಾಯ ನೀಡುವ ಯೋಜನೆ ಇದೆಯೇ: | ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಗೊಳಪಡುವ ಸರ್ಕಾರಿ ಪ್ರಥಮ ದರ್ಜೆ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅರ್ಹ ಪ್ರತಿಭಾವಂತ ಪರಿಶಿಷ್ಟಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ಪ್ರವರ್ಗಗಳು, ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಮೆರಿಟ್ ಆಧಾರದಲ್ಲಿ ವಿದ್ಯಾರ್ಥಿವೇತನ ಮಂಜೂರು ಮಾಡುವ ಯೋಜನೆಯು ಜಾರಿಯಲ್ಲಿದ್ದು, ಸರ್ಕಾರಿ ಕಾಲೇಜುಗಳಿಗೆ ಪ್ರವೇಶಾತಿ ಪಡೆದಿರುವ ಹಾಗೂ ಸದರಿ ಯೋಜನೆಯಡಿಯಲ್ಲಿ ಅರ್ಹತೆ ಹೊಂದುವ ಎಲ್ಲ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತದೆ. |
| ಉ) | NRI/OCI ವಿದ್ಯಾರ್ಥಿಗಳಿಗೆ ಪ್ರವೇಶ ಪ್ರಕ್ರಿಯೆಯಲ್ಲಿ ಎದುರಾಗುವ ದಾಖಲೆ ಸಮಸ್ಯೆಗಳ ಕುರಿತು ಸರ್ಕಾರ ಕೈಗೊಂಡ ಕ್ರಮಗಳ ವಿವರಗಳನ್ನು ಒದಗಿಸುವುದು: | NRI/OCI ವಿದ್ಯಾರ್ಥಿಗಳಿಗೆ ಪ್ರವೇಶ ಪ್ರಕ್ರಿಯೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕಾಲೇಜುಗಳಲ್ಲಿ ಯಾವುದೇ ಸಮಸ್ಯೆಗಳು ಕಂಡುಬಂದಿರುವುದಿಲ್ಲ. ಹಾಗೇನಾದರು ಸಮಸ್ಯೆಗಳು ಉದ್ಭವಿಸಿದ್ದಲ್ಲಿ ನಿಯಮಾನುಸಾರ ಪರಿಶೀಲಿಸಲು ಕ್ರಮವಹಿಸಲಾಗುವುದು. |
| ಊ) | ವಿದೇಶ ಶಿಕ್ಷಣ ಪದವಿಗಳ ಸಮಾನತೆ(Equivalency) ಪ್ರಮಾಣೀಕರಣ ಪ್ರಕ್ರಿಯೆಯನ್ನು ಸರಳೀಕರಿಸುವ ಯೋಜನೆ ಇದೆಯೇ: | ಈ ಸಂಬಂಧ ಯಾವುದೇ ಯೋಜನೆಗಳು ಉನ್ನತ ಶಿಕ್ಷಣ ಇಲಾಖೆಯಲ್ಲಿ ಇರುವುದಿಲ್ಲ. |
| ಋ) | ರಾಜ್ಯದ ವೃತ್ತಿಪರ ಕೋರ್ಸ್‌ಗಳಲ್ಲಿ(Medical & Allied Health Engineering) NRI ವಿದ್ಯಾರ್ಥಿಗಳಿಗೆ ಇರುವ ಮೀಸಲು ಪ್ರಮಾಣ ಮತ್ತು ಭರ್ತಿ ವಿವರವನ್ನು ನೀಡುವುದು; | NRI ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣದಲ್ಲಿ ಶೇ.15 ರಷ್ಟು ಸೀಟುಗಳು ಇದ್ದು, ಸದರಿ ಸೀಟುಗಳನ್ನು ನೀಟ್ RANK ಆಧಾರದ ಮೇಲೆ ಸೀಟು ಹಂಚಿಕೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾಗುತ್ತದೆ. |

ಇಡಿ 90 ವಿವಿಧ 2026

(ಬಸವರಾಜ ರಾಯರೆಡ್ಡಿ)
ಉನ್ನತ ಶಿಕ್ಷಣ ಸಚಿವರು